**ಪ್ರಭು ಬಿ. ಚವ್ಹಾಣ್**
ಪಶುಸಂಗೋಪನೆ ಸಚಿವರು ಹಾಗೂ
ಬೀದರ್ ಮತ್ತು ಯಾದಗಿರಿ ಜಿಲ್ಲಾ
ಉಸ್ತುವಾರಿ ಸಚಿವರು

ಕೊಠಡಿ ಸಂಖ್ಯೆ 442–443
4ನೇ ಮಹಡಿ, ವಿಕಾಸಸೌಧ
ಬೆಂಗಳೂರು – 560 001
ದೂರವಾಣಿ ಸಂ. : 080–22257285
: 080–22035090

**<u>ಮನವಿ</u>** ದಿನಾಂಕ: 09-10-2019

ರೈತರಿಗೆ ಆರ್ಥಿಕ ಸಂಕಷ್ಟಗಳನ್ನು ತಂದೊಡ್ಡುವ ಕಾಲುಬಾಯಿ ರೋಗವನ್ನು ನಿಯಂತ್ರಿಸಲು ಪ್ರತಿ 6 ತಿಂಗಳಿಗೊಮ್ಮೆ ಈ ರೋಗದ ವಿರುದ್ಧ ಲಸಿಕೆ ಹಾಕಿಸಿವುದೊಂದೇ ಮಾರ್ಗವಾಗಿದ್ದು, **<u>16 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾಕಾರ್ಯಕ್ರಮವನ್ನು</u>** ಪಶು ಪಾಲನೆ ಮತ್ತು ಪಶುವೈದ್ಯ ಸೇವಾ ಇಲಾಖೆ, ಕರ್ನಾಟಕ ಹಾಲು ಮಹಾಮಂಡಳಿ ಹಾಗು ಜಿಲ್ಲಾ ಹಾಲು ಒಕ್ಕೂಟಗಳ ಸಹಯೋಗದಲ್ಲಿ ***<u>ದಿನಾಂಕ: 14/10/2019 ರಿಂದ 4/11/2019 ರವರೆಗೆ</u>*** ರಾಜ್ಯಾದ್ಯಂತ ವ್ಯವಸ್ಥಿತವಾಗಿ ನಡೆಸಲಾಗುತ್ತದೆ.

ರಾಜ್ಯಾದ್ಯಂತ 3 ತಿಂಗಳು ಮೇಲ್ಪಟ್ಟ ದನ (ಎತ್ತು, ಹೋರಿ, ಹಸು), ಎಮ್ಮೆ ಮತ್ತು ಹಂದಿಗಳು ಸೇರಿ ಒಟ್ಟು 111.36 ಲಕ್ಷ ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ಹಾಕುವ ಗುರಿ ಹೊಂದಿದ್ದು, 16ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮದಲ್ಲಿ ರಾಜ್ಯಾದ್ಯಂತ 1192 ವಾಹನಗಳು ಮತ್ತು 1003 ತಂಡಗಳು ಭಾಗವಹಿಸಲಿದ್ದು, ಒಟ್ಟಾರೆ 9303 ಲಸಿಕಾದಾರರು ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್/ ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಿಗೆ ಹಾಗೂ ಪಟ್ಟಣ ಪಂಚಾಯತ್ / ಪುರಸಭೆ/ ನಗರ ಸಭೆ ವ್ಯಾಪ್ತಿಯಲ್ಲಿನ ವಾರ್ಡ್ ಗಳಿಗೆ ಭೇಟಿ ನೀಡಿ ಉಚಿತವಾಗಿ ಲಸಿಕೆಯನ್ನು ಹಾಕಲಿದ್ದಾರೆ.

ಜಾನುವಾರುಗಳ ಹಿಂಡಿನ “ಸಮೂಹ ರೋಗ ನಿರೋಧಕತೆ” ಹೆಚ್ಚಿಸುವುದು ಈ ಕಾರ್ಯಕ್ರಮದ ಮುಖ್ಯ ಉದೇಶವಾಗಿರುತ್ತದೆ. ಲಸಿಕೆ ಹಾಕಿಸುವುದರಿಂದ ಜಾನುವಾರುಗಳಲ್ಲಿ ರೋಗನಿರೋಧಕ ಶಕ್ತಿ ವೃದ್ಧಿಯಾಗಿ ರೋಗವನ್ನು ನಿಯಂತ್ರಿಸಬಹುದಾಗಿರುತ್ತದೆ. ರಾಜ್ಯವನ್ನು ರೋಗಮುಕ್ತ ವಲಯವನ್ನಾಗಿಸುವಲ್ಲಿ ಮತ್ತು ಹೈನುಗಾರಿಕೆಗೆ ಅಂತರ್‌ರಾಷ್ಟ್ರೀಯ ಮಾರುಕಟ್ಟೆ ಒದಗಿಸುವಲ್ಲಿ ಲಸಿಕಾ ಕಾರ್ಯಕ್ರಮ ಮಹತ್ವಪೂರ್ಣವಾಗಿದೆ.

ಆದುದರಿಂದ, ರೈತ ಬಾಂಧವರು ಹಾಗೂ ಜಾನುವಾರು ಮಾಲೀಕರು ಕಾರ್ಯಕ್ರಮದ ಪೂರ್ಣ ಉಪಯೋಗ ಪಡೆದುಕೊಂಡು, ಈ ಹಿಂದೆ ಎಷ್ಟೇ ಬಾರಿ ಲಸಿಕೆ ಮಾಡಿಸಿದ್ದರೂ ಸಹ ತಮ್ಮ ಗ್ರಾಮಗಳಲ್ಲಿ ನಿಗದಿಯಾದ ದಿನಾಂಕದಂದು ಪಶು ಪಾಲನಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಗ್ರಾಮಗಳಿಗೆ ಲಸಿಕೆ ಹಾಕಲು ಭೇಟಿ ನೀಡಿದಾಗ ತಪ್ಪದೆ ಜಾನುವಾರುಗಳಿಗೆ ಲಸಿಕೆಯನ್ನು ಹಾಕಿಸಲು ಜಿಲ್ಲಾ ಪಂಚಾಯತ್/ ತಾಲ್ಲೂಕು ಪಂಚಾಯತ್/ ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಲ್ಲಿನ ಹಾಗೂ ಪಟ್ಟಣ ಪಂಚಾಯತ್ / ಪುರಸಭೆ/ ನಗರ ಸಭೆ ವ್ಯಾಪ್ತಿಯಲ್ಲಿನ ವಾರ್ಡ್‌ಗಳಲ್ಲಿ ಜಾನುವಾರು ಹೊಂದಿರುವ ರೈತರಿಗೆ ಅರಿವು ಮೂಡಿಸಲು ಪತ್ರಿಕಾ ಮಾಧ್ಯಮ ಮತ್ತು ದೃಶ್ಯ ಹಾಗೂ ಶ್ರಾವ್ಯ ಮಾಧ್ಯಮದ ಮೂಲಕ ಮನವಿ ಮಾಡಬೇಕೆಂದು ವಿನಂತಿಸುತ್ತೇನೆ.

ಜಾನುವಾರುಗಳ ಆರೋಗ್ಯ ಸಂರಕ್ಷಣೆಯ ಅತೀ ಮುಖ್ಯ ಕಾರ್ಯಕ್ರಮವಾದ ಕಾಲುಬಾಯಿ ರೋಗ ಲಸಿಕಾ ಅಭಿಯಾನದಲ್ಲಿ ಎಲ್ಲಾ ಸ್ಥಳೀಯ ಸಂಸ್ಥೆಗಳು ಸಕ್ರಿಯವಾಗಿ ಪಾಲ್ಗೊಂಡು ಲಸಿಕಾ ಅಭಿಯಾನವು ಯಶಸ್ವಿಯಾಗಿ ಕಾರ್ಯಗತಗೊಳ್ಳಲು ಸಂಪೂರ್ಣ ಸಹಕಾರ ನೀಡಲು ಈ ಮೂಲಕ ತಮ್ಮಲ್ಲಿ ಕೋರುತ್ತೇನೆ.

ಅಭಿನಂದನೆಗಳೊಂದಿಗೆ,

ನಿಮ್ಮ ವಿಶ್ವಾಸಿ,
(ಪ್ರಭು ಬಿ. ಚವ್ಹಾಣ್)

ರವರಿಗೆ,

**ಅಧ್ಯಕ್ಷರು,**
**ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್,**
**ತಾಲ್ಲೂಕು ಪಂಚಾಯತ್,**
**ಗ್ರಾಮ ಪಂಚಾಯತ್‌ಗಳು.**